For more job news visit : www.kpscvaani.com

ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ದಿನಾಂಕ: 30.07.2026

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅಧಿಸೂಚಿಸಲಾದ ವಿವಿಧ ಇಲಾಖೆ/ನಿಗಮ/ಮಂಡಳಿಗಳ ಗ್ರೂಪ್-ಎ & ಬಿ ಹುದ್ದೆಗಳಿಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ತಾತ್ಕಾಲಿಕ ಫಲಿತಾಂಶ ಪ್ರಕಟಿಸಿರುವ ಬಗ್ಗೆ.

ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/ನೇ.ವಿ/11/2026 (ಆರ್.ಪಿ.ಸಿ) ದಿನಾಂಕ: 20.05.2026
ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/ನೇ.ವಿ/12/2026 (ಕೆ.ಕೆ) ದಿನಾಂಕ: 20.05.2026

*****

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ, ವಿವಿಧ ಇಲಾಖೆ/ನಿಗಮ/ ಮಂಡಳಿಯಲ್ಲಿನ ವಿವಿಧ ಗ್ರೂಪ್ ಎ & ಬಿ ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ 04.05.2026 ರಂದು ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಯ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ 05.07.2026 ರಂದು ಪ್ರಕಟಿಸಿ, ಸದರಿ ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ 08.07.2026 ಬೆಳಿಗ್ಗೆ 10.00 ರವರೆಗೆ ಕಾಲಾವಕಾಶ ನೀಡಲಾಗಿತ್ತು.

ಈ ಸಂಬಂಧ ಪ್ರಾಧಿಕಾರದಲ್ಲಿ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಗಳ ಮೂಲಕ ಪರಿಶೀಲಿಸಿ, ಪರಿಷ್ಕೃತ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ದಿನಾಂಕ 13.07.2026 ರಂದು ಪ್ರಕಟಿಸಲಾಗಿರುತ್ತದೆ.

ಅದರಂತೆ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ತಾತ್ಕಾಲಿಕ ಫಲಿತಾಂಶವನ್ನು ಪ್ರಕಟಿಸಲಾಗಿದ್ದು, ತಾತ್ಕಾಲಿಕ ಫಲಿತಾಂಶಕ್ಕೆ ಆಕ್ಷೇಪಣೆಗಳಿದ್ದಲ್ಲಿ **ದಿನಾಂಕ 01.08.2026 ಮಧ್ಯಾಹ್ನ 12.30 ರೊಳಗೆ** ನಿಗದಿತ ಲಿಂಕ್ (https://cetonline.karnataka.gov.in/kea/) ಮೂಲಕ ಪೂರಕ ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು. ಪೂರಕ ದಾಖಲೆಗಳಿಲ್ಲದ ಹಾಗೂ ಕೀ ಉತ್ತರಗಳಿಗೆ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಈ ಹಂತದಲ್ಲಿ ಪರಿಗಣಿಸಲಾಗುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in